ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	1196
ಸದಸ್ಯರ ಹೆಸರು	:	ಶ್ರೀ ಎಸ್. ರುದ್ರೇಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	16/03/2021
ಉತ್ತರಿಸುವ ಸಚಿವರು	:	ಮಾನ್ಯ ನಗರಾಭಿವೃದ್ಧಿ ಸಚಿವರು.

ಕ.ಸಂ.	ಪ್ರಶ್ನೆ	ಉತ್ತರ
(ಅ)	ಕರ್ನಾಟಕ ರಾಜ್ಯದಲ್ಲಿರುವ ನಗರಗಳನ್ನು ವರ್ಗೀಕರಣ ಮಾಡಲಾಗಿದೆಯೇ;	ಹೌದು. ಕರ್ನಾಟಕ ರಾಜ್ಯದಲ್ಲಿರುವ ನಗರಗಳನ್ನು ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ ಮತ್ತು ಮಹಾನಗರ ಪಾಲಿಕೆಯನ್ನಾಗಿ ವರ್ಗೀಕರಣ ಮಾಡಲಾಗಿದೆ.
(ಆ)	ಮಾಡಿದ್ದಲ್ಲಿ, ವರ್ಗೀಕರಣದ ಮಾನದಂಡಗಳೇನು; (ಮಾಹಿತಿಯನ್ನು ಒದಗಿಸುವುದು)	ಪಟ್ಟಣ ಪಂಚಾಯಿತಿಯನ್ನಾಗಿ ಪರಿವರ್ತಿಸಲು ಕರ್ನಾಟಕ ಪುರಸಭೆ ಅಧಿನಿಯಮ 1964 ಕಲಂ 349 ರನ್ವಯ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುವುದು. 1. ಅಂತಹ ಪ್ರದೇಶದ ಜನಸಂಖ್ಯೆಯು 10,000ಕ್ಕೆ ಕಡಿಮೆ ಇಲ್ಲದಂತೆ ಹಾಗೂ 20,000ಕ್ಕೆ ಹೆಚ್ಚಿಲ್ಲದಂತಿರಬೇಕು. 2. ಅಂತಹ ಪ್ರದೇಶದ ಜನಸಂಖ್ಯೆಯು ಜನಸಾಂದ್ರತೆಯು ಆ ಪ್ರದೇಶದ ಒಂದು ಚ.ಕಿ.ಮೀ ವಿಸ್ತೀರ್ಣಕ್ಕೆ 400 ಕ್ಕಿಂತ ಕಡಿಮೆ ಇಲ್ಲದಿರುವುದು. 3. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ ಶೇ. 50 ಕ್ಕಿಂತ ಕಡಿಮೆ ಇಲ್ಲದಿರುವುದು. ಮುಂದುವರೆದು, ದಿ:19.03.2015 ರ ಸಚಿವ ಸಂಪುಟ ಸಭೆಯ ನಿರ್ಣಯದಂತೆ 15,000ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಗಳನ್ನು ಮಾತ್ರ ಮೇಲ್ದರ್ಜೆಗೇರಿಸಲು ಕ್ರಮವಹಿಸಲಾಗಿರುತ್ತದೆ.

		ಪುರಸಭೆಯನ್ನಾಗಿ ಪರಿವರ್ತಿಸಲು ಕರ್ನಾಟಕ ಪುರಸಭೆಗಳ ಅಧಿನಿಯಮ 1964ರ ಕಲಂ ನಿಯಮ 3(1), 3(2) ಗಳನ್ವಯ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುವುದು. 1. ಆ ಪ್ರದೇಶದ ಜನಸಂಖ್ಯೆ 20,000 ಕ್ಕೆ ಕಡಿಮೆ ಇಲ್ಲದಂತೆ ಹಾಗೂ 50,000 ಕ್ಕೆ ಹೆಚ್ಚಿಲ್ಲದಂತಿರಬೇಕು, 2. ಅಂತಹ ಪ್ರದೇಶದ ಜನಸಂಖ್ಯೆಯ ಜನಸಾಂದ್ರತೆಯು ಆ ಪ್ರದೇಶದ ಒಂದು ಚದುರ ಕಿ.ಮೀ. ವಿಸ್ತೀರ್ಣಕ್ಕೆ 1500 ಕ್ಕಿಂತ ಕಡಿಮೆ ಇಲ್ಲದಿರುವುದು, 3. ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂತಹ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ ರಾಜಸ್ವ ವಾರ್ಷಿಕ ಒಂಬತ್ತು ಲಕ್ಷ ಅಥವಾ ವಾರ್ಷಿಕ ತಲಾ ಒಬ್ಬರಿಗೆ 45 ರೂಪಾಯಿಗಳ ದರದಂತೆ ಲೆಕ್ಕಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆ ಇರದ ಹೊರತು, 4. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ ಶೇ.50 ಕ್ಕಿಂತ ಕಡಿಮೆ ಇಲ್ಲದಿರುವುದು. ನಗರಸಭೆಯನ್ನಾಗಿ ಪರಿವರ್ತಿಸಲು ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ನಿಯಮ 3(1), 3(2) ರನ್ವಯ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುವುದು. 1. ಆ ಪ್ರದೇಶದ ಜನಸಂಖ್ಯೆ 50,000 ಕ್ಕೆ ಕಡಿಮೆ ಇಲ್ಲದಂತೆ ಹಾಗೂ 3 ಲಕ್ಷಕ್ಕೆ ಹೆಚ್ಚಿಲ್ಲದಂತಿರಬೇಕು, 2. ಅಂತಹ ಪ್ರದೇಶದ ಜನಸಂಖ್ಯೆಯ ಜನಸಾಂದ್ರತೆಯು ಆ ಪ್ರದೇಶದ ಒಂದು ಚದುರ ಕಿ.ಮೀ. ವಿಸ್ತೀರ್ಣಕ್ಕೆ 1500 ಕ್ಕಿಂತ ಕಡಿಮೆ ಇಲ್ಲದಿರುವುದು, 3. ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂತಹ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ ರಾಜಸ್ವ ವಾರ್ಷಿಕ ಒಂಬತ್ತು ಲಕ್ಷ ಅಥವಾ ವಾರ್ಷಿಕ ತಲಾ ಒಬ್ಬರಿಗೆ 45 ರೂಪಾಯಿಗಳ ದರದಂತೆ ಲೆಕ್ಕ ಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆ ಇರದ ಹೊರತು,

4. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ ಶೇ.50 ಕ್ಕಿಂತ ಕಡಿಮೆ ಇಲ್ಲದಿರುವುದು.

ಮಹಾನಗರ ಪಾಲಿಕೆಯನ್ನಾಗಿ ಪರಿವರ್ತಿಸಲು ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ರ ನಿಯಮ 3(1) ರನ್ವಯ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುವುದು.

1. ಆ ಪ್ರದೇಶದ ಜನಸಂಖ್ಯೆ 3 ಲಕ್ಷಕ್ಕಿಂತ ಕಡಿಮೆ ಇಲ್ಲದ ಹೊರತು.
2. ಅಂತಹ ಪ್ರದೇಶದ ಜನಸಂಖ್ಯೆಯ ಜನಸಾಂದ್ರತೆಯು ಆ ಪ್ರದೇಶದ ಒಂದು ಚದುರ ಕಿ.ಮೀ. ವಿಸ್ತೀರ್ಣಕ್ಕೆ 3000 ಕ್ಕಿಂತ ಕಡಿಮೆ ಇಲ್ಲದಿರುವುದು,
3. ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂತಹ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ ರಾಜಸ್ವ ವಾರ್ಷಿಕ 6 ಕೋಟಿ ಅಥವಾ ವಾರ್ಷಿಕ ತಲಾ ಒಬ್ಬರಿಗೆ 200 ರೂಪಾಯಿಗಳ ದರದಂತೆ ಲೆಕ್ಕ ಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆ ಇರದ ಹೊರತು,
4. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ ಶೇ.50 ಕ್ಕಿಂತ ಕಡಿಮೆ ಇಲ್ಲದಿರುವುದು.

ಸಂಖ್ಯೆ: ನಅಇ/14/ಎಲ್‌ಸಿಕ್ಯೂ.2021

(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು